Akashvani : Bangalore
National Bulletin In Kannada
22.03.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****

ಮುಖ್ಯಾಂಶಗಳು

1. ಸಹಾನುಭೂತಿ ಮತ್ತು ಸಾಮರಸ್ಯ ಭಾರತೀಯ ಸಾಂಸ್ಕೃತಿಯ ಪ್ರಮುಖ ಮೌಲ್ಯಗಳು - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಭಯೋತ್ಪಾದನೆ ಕುರಿತಂತೆ ಸರ್ಕಾರ ಶೂನ್ಯ ಸಹಿಷ್ಣುತಾ ನೀತಿ ಪಾಲನೆ - ಕೇಂದ್ರ ಗೃಹಸಚಿವ ಅಮಿತ್ ಶಾ
3. ಭಾರತ - ಮಂಗೋಲಿಯಾ ರಾಜತಾಂತ್ರಿಕ ಸಂಬಂಧಗಳಿಗೆ ೭೦ ವರ್ಷ; ಉಭಯ ರಾಷ್ಟ್ರಗಳಿಂದ ಕಾರ್ಯತಂತ್ರದ ಪಾಲುದಾರಿಕೆ ಬಲವರ್ಧನೆಗೆ ಒತ್ತು
4. ಕೋಲ್ಕತ್ತಾದಲ್ಲಿಂದು ೧೮ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಕ್ರಿಕೆಟ್‌ಗೆ ಚಾಲನೆ; ಉದ್ಘಾಟನಾ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್-ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿ

**********

ಒಂದು ದೇಶ ಅದರ ವಂಚಿತ ವರ್ಗಗಳ ಬಗ್ಗೆ ಹೊಂದಿರುವ ಸಹಿಷ್ಣುತೆಯೇ ಆ ದೇಶದ ಘನತೆಯನ್ನು ಎತ್ತಿ ತೋರಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ನಿನ್ನೆ ನಡೆದ ನೇರಳೆ ಉತ್ಸವವನ್ನುದ್ದೇಶಿಸಿ ಮಾತನಾಡಿದ ಅವರು, ಸಹಾನುಭೂತಿ, ಒಳಗೊಳ್ಳುವಿಕೆ ಮತ್ತು ಸಾಮರಸ್ಯ ಭಾರತೀಯ ಸಂಸ್ಕೃತಿ ಮತ್ತು ನಾಗರಿಕತೆಯ ಮೌಲ್ಯಗಳಾಗಿವೆ. ವಿವಿಧ ಅಂಗವೈಕಲ್ಯಗಳು ಹಾಗೂ ಜನರ ಜೀವನದ ಮೇಲೆ ಅವುಗಳ ಪರಿಣಾಮದ ಬಗ್ಗೆ ಜಾಗೃತಿ ಮೂಡಿಸುವುದು ಈ ನೇರಳೆ ಉತ್ಸವದ ಗುರಿಯಾಗಿದೆ ಎಂದರು. ಸಂವಿಧಾನದ ಪೀಠಿಕೆಯು ಸಾಮಾಜಿಕ ನ್ಯಾಯ, ಸ್ಥಾನಮಾನದ ಸಮಾನತೆ ಮತ್ತು ಪ್ರತಿಯೊಬ್ಬರ ಘನತೆಯ ಬಗ್ಗೆ ತಿಳಿಸುತ್ತದೆ

ಎಂದ ಅವರು, ಸುಗಮ್ಯ ಭಾರತ ಅಭಿಯಾನದ ಮೂಲಕ ವಿಶೇಷಚೇತನರನ್ನು ಸಬಲೀಕರಣಗೊಳಿಸುವ ಜತೆಗೆ ಎಲ್ಲಾ ಕ್ಷೇತ್ರಗಳಲ್ಲಿ ಅವರ ಸಮಾನ ಭಾಗವಹಿಸುವಿಕೆಯನ್ನು ಖಚಿತಪಡಿಸಲು ಸರ್ಕಾರ ಶ್ರಮಿಸುತ್ತಿರುವ ಕುರಿತಂತೆ ಶ್ಲಾಘನೆ ವ್ಯಕ್ತಪಡಿಸಿದರು.

******

ಕಾರ್ಯಕ್ರಮದ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್, ಈ ಬಾರಿಯ ಪರ್ಪಲ್ ಫೆಸ್ಟ್, ೬೫ ಸಾವಿರ ನೋಂದಣಿಗಳನ್ನು ಕಂಡಿದ್ದು, ೨೫ ಸಾವಿರ ಸಕ್ರಿಯ ಪಾಲ್ಗೊಳ್ಳುವಿಕೆ ದಾಖಲಿಸಿದೆ ಎಂದರು.

**********

ಭಯೋತ್ಪಾದನೆ ಕುರಿತಂತೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಶೂನ್ಯ ಸಹಿಷ್ಣುತೆ ನೀತಿಯನ್ನು ಅನುಸರಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ರಾಜ್ಯಸಭೆಯಲ್ಲಿ ನಿನ್ನೆ ಗೃಹ ಸಚಿವಾಲಯದ ಕಾರ್ಯ ವೈಖರಿ ಕುರಿತ ಚರ್ಚೆಯಲ್ಲಿ ಪಾಲ್ಗೊಂಡು, ಉತ್ತರಿಸಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ತಂತ್ರಜ್ಞಾನ ಬಳಕೆ ಹಾಗೂ ರಾಜಕೀಯ ಇಚ್ಛಾಶಕ್ತಿಯ ಮೂಲಕ ರಾಷ್ಟ್ರದ ಭದ್ರತೆಯನ್ನು ಕೇಂದ್ರ ಸರ್ಕಾರ ಮತ್ತಷ್ಟು ಬಲಪಡಿಸಿದೆ. ಈ ಮೊದಲು ಎಡಪಂಥೀಯ ಉಗ್ರವಾದ, ಕಾಶ್ಮೀರದಲ್ಲಿ ಭಯೋತ್ಪಾದನೆ ಮತ್ತು ಈಶಾನ್ಯ ಪ್ರದೇಶದಲ್ಲಿ ದಂಗೆಯಂತಹ ಮೂರು ಪ್ರಮುಖ ಸವಾಲುಗಳನ್ನು ದೇಶ ಎದುರಿಸುತ್ತಿದ್ದು, ಅದು ದೇಶದ ಪ್ರಗತಿಗೆ ಅಡ್ಡಿಯಾಗಿತ್ತು, ಆದರೆ ಸರ್ಕಾರ ತನ್ನ ದೃಢವಾದ ಕ್ರಮಗಳಿಂದ ಈ ಎಲ್ಲಾ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಿದೆ. ಇದರ ಪರಿಣಾಮವಾಗಿ ಇಂದು ಭಯೋತ್ಪಾದನೆ, ನಕ್ಸಲ್ ಧೋರಣೆ ಮತ್ತು ಉಗ್ರವಾದ ಅಳಿವಿನಂಚಿನಲ್ಲಿದೆ ಎಂದು ಹೇಳಿದರು. ಎನ್‌ಡಿಎ ಸರ್ಕಾರದ ಅವಧಿಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನೆಯಿಂದಾಗುವ ಸಾವಿನ ಪ್ರಮಾಣ ಶೇಕಡ ೭೦ರಷ್ಟು ಇಳಿಕೆಯಾಗಿದ್ದು, ಭಯೋತ್ಪಾದನಾ ಘಟನೆಗಳು ಕಡಿಮೆಯಾಗಿವೆ, ಮುಂದಿನ ವರ್ಷದ ಮಾರ್ಚ್ ವೇಳೆಗೆ ನಕ್ಸಲ್ ಧೋರಣೆಯಿಂದ ದೇಶ ಮುಕ್ತವಾಗಲಿದೆ ಎಂದು ಸಚಿವರು ಹೇಳಿದರು.

**********

ಭಾರತ ಹಾಗೂ ಮಂಗೋಲಿಯಾ ತಮ್ಮ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದೆ. ಉಭಯ ರಾಷ್ಟ್ರಗಳ ನಡುವಿನ ರಾಜತಾಂತ್ರಿಕ ಸಂಬಂಧಗಳಿಗೆ ೭೦ ವರ್ಷ ಪೂರೈಸಿದ ಹಿನ್ನೆಲೆ ನಿನ್ನೆ ಎರಡೂ ರಾಷ್ಟ್ರಗಳ ಹಿರಿಯ ಅಧಿಕಾರಿಗಳು ದ್ವಿಪಕ್ಷೀಯ ಸಭೆಗಳನ್ನು ನಡೆಸಿ, ಪ್ರಮುಖ ಕ್ಷೇತ್ರಗಳಿಗೆ ಸಹಕಾರ ಮತ್ತು ದ್ವಿಪಕ್ಷೀಯ ಸಂಬಂಧಗಳ ಸಮಗ್ರ ಪರಿಶೀಲನೆ ನಡೆಸಿದರು. ಇದರ ನೇಪಥ್ಯದಲ್ಲಿ ವಿದೇಶಾಂಗ ಸಚಿವಾಲಯ ಪೂರ್ವ ವಿಭಾಗದ ಕಾರ್ಯದರ್ಶಿ ಜಯದೀಪ್ ಮಜುಂದಾರ್ ಮತ್ತು ಮಂಗೋಲಿಯಾ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ರಾಜ್ಯ ಕಾರ್ಯದರ್ಶಿ ಮುಂಖ್ತುಶಿಗ್ ಲಖಾನಾಜಾವ್ ನಡುವೆ ನಿನ್ನೆ ನವದೆಹಲಿಯಲ್ಲಿ ಸಮಾಲೋಚನಾ ಸಭೆ ನಡೆಯಿತು. ಈ ವೇಳೆ ಉಭಯ ರಾಷ್ಟ್ರಗಳ ನಡುವೆ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಇಂಧನ, ಸಂಪರ್ಕ, ಸಂಸ್ಕೃತಿ, ಸಾಮರ್ಥ್ಯವೃದ್ಧಿ, ಗಣಿಗಾರಿಕೆ, ರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಕುರಿತಂತೆ ಪರಾಮರ್ಶೆ ನಡೆಸಲಾಯಿತು.

**********

ಕೃಷಿ ದೇಶದ ಆರ್ಥಿಕತೆಯ ಬೆನ್ನೆಲುಬು ಮತ್ತು ರೈತರ ಕಲ್ಯಾಣ - ನರೇಂದ್ರ ಮೋದಿ ಸರ್ಕಾರದ ಆದ್ಯತೆಯಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಹೇಳಿದ್ದಾರೆ. ೨೦೨೫-೨೬ರ ತಮ್ಮ ಸಚಿವಾಲಯಕ್ಕೆ ಸಂಬಂಧಿಸಿದ ಅನುದಾನಗಳ ಬೇಡಿಕೆಗಳ ಮೇಲಿನ ಚರ್ಚೆಗೆ ಉತ್ತರಿಸಿದ ಅವರು, ಕಳೆದ ಹತ್ತು ವರ್ಷಗಳಲ್ಲಿ ಕೃಷಿ ಕ್ಷೇತ್ರಕ್ಕೆ ಎನ್‌ಡಿಎ ಸರ್ಕಾರ ಬಜೆಟ್‌ನಲ್ಲಿ ಹತ್ತು ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಹಣವನ್ನು ಮೀಸಲಿಟ್ಟಿದೆ ಎಂದು ಹೇಳಿದ್ದಾರೆ. ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿಯಲ್ಲಿ ೮೦ ಕೋಟಿಗೂ ಹೆಚ್ಚು ಫಲಾನುಭವಿಗಳಿಗೆ ಸರ್ಕಾರ ಉಚಿತ ಅಕ್ಕಿ ಮತ್ತು ಗೋಧಿಯನ್ನು ನೀಡುತ್ತಿದೆ. ೨೦೧೩-೧೪ರಲ್ಲಿ ಆಹಾರ ಧಾನ್ಯ ಉತ್ಪಾದನೆಯು ಸುಮಾರು ೨೬೫ ಮಿಲಿಯನ್ ಟನ್‌ಗಳಾಗಿತ್ತು, ಇದೀಗ ೩೩೦ ಮಿಲಿಯನ್ ಟನ್‌ಗಳಿಗೂ ಹೆಚ್ಚಾಗಿದೆ ಎಂದು ಹೇಳಿದರು. ೨೦೦೪ ರಿಂದ ೨೦೧೪ ರವರೆಗೆ ೪೫ ಕೋಟಿ ೯೦ ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಖರೀದಿಸಲಾಗಿದೆ ಮತ್ತು ಕೇಂದ್ರ ಸರ್ಕಾರ ಇಲ್ಲಿಯವರೆಗೆ ೭೫ ಕೋಟಿ ೭೪ ಲಕ್ಷ ಮೆಟ್ರಿಕ್ ಟನ್‌ಗಳನ್ನು ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸಿದೆ. ಡಿಜಿಟಲ್ ಕೃಷಿ ಮಿಷನ್ ಅಡಿಯಲ್ಲಿ, ದೇಶದ ಪ್ರತಿಯೊಬ್ಬ

ರೈತನಿಗೆ ಡಿಜಿಟಲ್ ಗುರುತಿನ ಚೀಟಿಯನ್ನು ಒದಗಿಸಲಾಗುವುದು. ಈ ಉಪಕ್ರಮದ ಮೂಲಕ, ರೈತರು ವಿವಿಧ ಸರ್ಕಾರಿ ಯೋಜನೆಗಳ ಪ್ರಯೋಜನಗಳನ್ನು ಪಡೆಯಬಹುದು ಎಂದು ಅವರು ಹೇಳಿದರು.

**********

ಸಚಿವರ ಉತ್ತರದ ನಂತರ ೨೦೨೫-೨೬ ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಬೇಡಿಕೆಗಳು ಮತ್ತು ಅನುದಾನಗಳಿಗೆ ಸದನ ಅನುಮೋದನೆ ನೀಡಿದೆ. ಬಿಜೆಪಿಯ ದುಶ್ಯಂತ್ ಸಿಂಗ್, ಕೇಂದ್ರ ಬಜೆಟ್‌ನಲ್ಲಿ ಕೃಷಿ ಮತ್ತು ರೈತ ಕಲ್ಯಾಣ ವಲಯಕ್ಕೆ ಸರ್ಕಾರ ಒಂದು ಲಕ್ಷ ೩೭ ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ, ಇದು ಒಟ್ಟು ಕೇಂದ್ರ ಬಜೆಟ್‌ನ ಸುಮಾರು ೨.೭ ಪ್ರತಿಶತದಷ್ಟಿದೆ ಎಂದು ಹೇಳಿದರು. ಕೃಷಿ ಕ್ಷೇತ್ರದ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಹತ್ತು ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ. ರೈತರು ತಮ್ಮ ಬೆಳೆಗಳನ್ನು ಮಾರಾಟ ಮಾಡಲು ಸರ್ಕಾರ ಉತ್ತಮ ಗುಣಮಟ್ಟದ ಬೀಜ ಮತ್ತು ಮಾರುಕಟ್ಟೆ ಪ್ರವೇಶವನ್ನು ಒದಗಿಸಿದೆ ಎಂದು ದುಶ್ಯಂತ್ ಸಿಂಗ್ ಹೇಳಿದರು.

**********

ನಾಲ್ಕನೇ ಭಾರತ-ಐರೋಪ್ಯ ಒಕ್ಕೂಟ ಕಡಲ ಭದ್ರತಾ ಸಂವಾದ ನವದೆಹಲಿಯಲ್ಲಿ ನಿನ್ನೆ ನಡೆಯಿತು. ಸಭೆಯಲ್ಲಿ ಭಾರತೀಯ ನಿಯೋಗದ ನೇತೃತ್ವವನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಜಂಟಿ ಕಾರ್ಯದರ್ಶಿ ಮುವಾನ್‌ಪುಯಿ ಸೈಯಾವಿ ವಹಿಸಿದ್ದರೆ, ಐರೋಪ್ಯ ಒಕ್ಕೂಟದ ನಿಯೋಗದ ನೇತೃತ್ವವನ್ನು ಐರೋಪ್ಯ ವಿದೇಶಾಂಗ ಕ್ರಿಯಾ ಸೇವೆಯ ಭದ್ರತಾ ಮತ್ತು ರಕ್ಷಣಾ ನೀತಿ ವಿಭಾಗದ ನಿರ್ದೇಶಕ ಮಾಸಿಜ್ ಸ್ಟೆಡೇಜೆಕ್ ವಹಿಸಿದ್ದರು. ಈ ವೇಳೆ ಪ್ರಸ್ತುತ ಕಡಲ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಪರಸ್ಪರ ಸಹಕಾರದ ಉಪಕ್ರಮಗಳು ಮತ್ತು ಸಮಗ್ರ ಕಡಲ ಭದ್ರತೆಗಾಗಿ ಅಂತಾರಾಷ್ಟ್ರೀಯ ಮತ್ತು ಪ್ರಾದೇಶಿಕ ಕಾರ್ಯ ವಿಧಾನಗಳನ್ನು ಬಲಪಡಿಸುವ ಮಾರ್ಗಗಳ ಕುರಿತು ಪರಿಶೀಲನೆ ನಡೆಸಲಾಯಿತು.

**********

೧೮ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ೨೦೨೫ ಟಿ೨೦ ಕ್ರಿಕೆಟ್ ಪಂದ್ಯಾವಳಿಗೆ ಇಂದು ಚಾಲನೆ ದೊರೆಯಲಿದೆ. ಕೋಲ್ಕತ್ತಾದ ಈಡನ್ ಗಾರ್ಡನ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಕೋಲ್ಕತ್ತಾ ನೈಟ್ ರೈಡರ್ಸ್ - ಕೆಕೆಆರ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ೭.೩೦ಕ್ಕೆ ಆರಂಭವಾಗಲಿದೆ. ಉದ್ಘಾಟನಾ ಪಂದ್ಯಕ್ಕೂ ಮೊದಲು ನಡೆಯಲಿರುವ ಅದ್ಧೂರಿ ಉದ್ಘಾಟನಾ ಸಮಾರಂಭದಲ್ಲಿ ಹಲವು ಹಿಂದಿ ಚಲನಚಿತ್ರರಂಗದ ನಟ, ನಟಿಯರು, ಖ್ಯಾತ ಹಾಡುಗಾರರು ಪಾಲ್ಗೊಂಡು ಜನರ ಮನರಂಜಿಸಲಿದ್ದಾರೆ. ಪಂದ್ಯಾವಳಿಯಲ್ಲಿ ಒಟ್ಟು ೧೦ ತಂಡಗಳು, ಒಟ್ಟು ೭೪ ಪಂದ್ಯಗಳಲ್ಲಿ ಸ್ಪರ್ಧಿಸಲಿದ್ದು, ಫೈನಲ್ ಪಂದ್ಯ ಮೇ ೨೫ರಂದು ನಡೆಯಲಿದೆ. ಹತ್ತು ತಂಡಗಳನ್ನು ಎರಡು ಗುಂಪುಗಳಾಗಿ ವಿಂಗಡಿಸಲಾಗಿದ್ದು, ಎ ಗುಂಪಿನಲ್ಲಿ ಚೆನ್ನೈ ಸೂಪರ್ ಕಿಂಗ್ಸ್, ರಾಯಲ್ ಚಾಲೆಂಜರ್ಸ್ ಬೆಂಗಳೂರು, ರಾಜಸ್ತಾನ್ ರಾಯಲ್ಸ್, ಪಂಜಾಬ್ ಕಿಂಗ್ಸ್ ಮತ್ತು ಕೋಲ್ಕತ್ತಾ ನೈಟ್ ರೈಡರ್ಸ್ ಸ್ಥಾನ ಪಡೆದಿದ್ದರೆ, ಬಿ ಗುಂಪಿನಲ್ಲಿ ಮುಂಬೈ ಇಂಡಿಯನ್ಸ್, ಗುಜರಾತ್ ಟೈಟನ್ಸ್, ಡೆಲ್ಲಿ ಕ್ಯಾಪಿಟಲ್ಸ್, ಸನ್‌ರೈಸರ್ಸ್ ಹೈದರಾಬಾದ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಇರಲಿವೆ. ಈ ನಡುವೆ ಬಿಸಿಸಿಐ ಐಪಿಎಲ್ ಟೂರ್ನಿಗೆ ಸಂಬಂಧಿಸಿದಂತೆ ಹಲವು ಪ್ರಮುಖ ಬದಲಾವಣೆಗಳನ್ನು ತಂದಿದ್ದು, ಅದರಲ್ಲಿ ಇತ್ತೀಚಿನ ಎಂಜಲು ನಿಷೇಧವನ್ನು ತೆಗೆದು ಹಾಕಿರುವುದು ಪ್ರಮುಖ ನಿರ್ಧಾರಗಳಲ್ಲಿ ಒಂದಾಗಿದೆ.

**********

ಸ್ವಿಜ್ಜರ್‌ಲ್ಯಾಂಡ್‌ನ ಬ್ಯಾಸಲ್‌ನಲ್ಲಿ ನಡೆಯುತ್ತಿರುವ ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಮಹಿಳೆಯರ ಡಬಲ್ಸ್ ವಿಭಾಗದಲ್ಲಿ ಭಾರತದ ತ್ರಿಶಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಇಂದು ನಡೆಯಲಿರುವ ಸೆಮಿಫೈನಲ್ ಪಂದ್ಯದಲ್ಲಿ ಅವರು, ಚೀನಾದ ಲಿಯೂಶೆಂಗ್‌ಶೂ ಮತ್ತು ಟ್ಯಾನ್‌ನಿಂಗ್ ಜೋಡಿಯನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತೀಯ ಜೋಡಿ ಚೀನಾದ ೮ನೇ ಶ್ರೇಯಾಂಕಿತ ಯುಂಗ್ ಎಂಗಾ ಟಿಂಗ್ ಮತ್ತು ಯುಂಗ್ ಪುಯಿ ಲಾಮ್ ಜೋಡಿಯನ್ನು ೨೧-೧೮, ೨೧-೧೪ ಸೆಟ್‌ಗಳ ಅಂತರದಲ್ಲಿ ಮಣಿಸಿ,

ಮುಂದಿನ ಹಂತ ಪ್ರವೇಶಿಸಿದೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಶಂಕರ್ ಸುಬ್ರಮಣಿಯನ್, ಫ್ರಾನ್ಸನ ಕ್ರಿಸ್ಟೋಪೊಪೊವ್ ವಿರುದ್ಧ ೧೦-೨೧, ೧೪-೨೧ ಸೆಟ್‌ಗಳ ಅಂತರದಲ್ಲಿ ಸೋಲನುಭವಿಸಿ, ಟೂರ್ನಿಯಿಂದ ಹೊರಬಿದ್ದಿದ್ದಾರೆ.

**********